| | | |
|---|---|---|
| 22 | ಮಂಡ್ಯ | 3887 |
| 23 | ಮೈಸೂರು | 10275 |
| 24 | ರಾಯಚೂರು | 6151 |
| 25 | ರಾಮನಗರ | 853 |
| 26 | ಶಿವಮೊಗ್ಗ | 3094 |
| 27 | ತುಮಕೂರು | 5359 |
| 28 | ಉಡುಪಿ | 5943 |
| 29 | ಉತ್ತರ ಕನ್ನಡ | 1583 |
| 30 | ಯಾದಗಿರಿ | 974 |

**ವಸತಿ ಶಾಲೆ ಮಂಜೂರಾತಿ**

**476 (749) ಶ್ರೀ ವೀರಬದ್ರಪ್ಪ ಹಾಲಹರವಿ (ಹುಬ್ಬಳ್ಳಿ ಧಾರವಾಡ ಪೂರ್ವ)** : ಮಾನ್ಯ ಸಮಾಜ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಹುಬ್ಬಳ್ಳಿ–ಧಾರವಾಡ ಪೂರ್ವ ಮೀಸಲು ವಿಧಾನ ಸಭಾ ಕ್ಷೇತ್ರಕ್ಕೆ ಮೊರಾರ್ಜಿ ದೇಸಾಯಿ ಹಾಗೂ ಕಿತ್ತೂರು ರಾಣಿ ಚೆನ್ನಮ್ಮ ವಸತಿ ಶಾಲೆ ಮಂಜೂರಾತಿ ನೀಡುವ ವಿಚಾರ ಸರ್ಕಾರದ ಮುಂದೆ ಇದೆಯೇ?

ಆ) ಇದ್ದಲ್ಲಿ, ಯಾವಾಗ ಮಂಜೂರಾತಿ ನೀಡಲಾಗುವುದು?

ಇ) ಇಲ್ಲದಿದ್ದಲ್ಲಿ ಕಾರಣಗಳೇನು?

**ಶ್ರೀ ಡಿ. ಸುಧಾಕರ (ಸಮಾಜ ಕಲ್ಯಾಣ ಸಚಿವರು)** :

ಅ) ಆ) ಮತ್ತು ಇ)

2010–11ನೇ ಸಾಲಿನಲ್ಲಿ ಅನುದಾನದ ಲಭ್ಯತೆ ಅನುಸಾರ ಕ್ರಮ ಜರುಗಿಸಲಾಗುವುದು.

**ಡಾ॥ ಬಿ.ಆರ್. ಅಂಬೇಡ್ಕರ್ ಭವನ ನಿರ್ಮಾಣ**

**478 (374) ಶ್ರೀ ವೆಂಟಕಸ್ವಾಮಿ (ದೇವನಹಳ್ಳಿ)** : ಮಾನ್ಯ ಸಮಾಜ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ದೇವನಹಳ್ಳಿ ತಾಲ್ಲೂಕಿನಲ್ಲಿ ಡಾ॥ಬಿ.ಆರ್.ಅಂಬೇಡ್ಕರ್ ಭವನ ನಿರ್ಮಾಣದ ಉದ್ದೇಶ ಸರ್ಕಾರಕ್ಕೆ ಇದೆಯೇ?